## ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ರವರ ನ್ಯಾಯಾಲಯ, ಗುಂಡ್ಲುಪೇಟೆ

**ಸಿಸಿ ನಂಃ 624/2022**

| | | |
|---|---|---|
| ಸಾಕ್ಷಿದಾರರ ಹೆಸರು | ಅಬ್ದುಲ್ ವಹಾಬ್ | ಪ್ರಮಾಣ ವಚನ ಬೋಧಿಸಿದ ದಿನಾಂಕಃ 08.06.2023 |
| ತಂದೆಯ ಹೆಸರು/ ಗಂಡನ ಹೆಸರು | ಅಬ್ದುಲ್ ಜಬ್ಬರ್ | |
| ವಯಸ್ಸು | 24 ವರ್ಷ | |
| ಉದ್ಯೋಗ | ಕೂಲಿ | ಫ್ರಾಸಾಃ 2 |
| ವಾಸ | ಗುಂಡ್ಲುಪೇಟೆ ಪಟ್ಟಣ | ಚಾಸಾಃ 2 |

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿರವರಿಂದಃ**

ಚಾಸಾ-1 ನನ್ನ ತಾಯಿ. ಈಗ್ಗೆ ಎರಡು ವರ್ಷಗಳ ಹಿಂದೆ ನಾನು ಬೈಕ್ ನ್ನು ಬೇರೆ ಸ್ಥಳದಲ್ಲಿ ನಿಲ್ಲಿಸಿದ್ದು, ನನ್ನ ತಾಯಿ ಬೈಕ್ ನ್ನು ಯಾರೋ ಕಳುವು ಮಾಡಿಕೊಂಡು ಹೋಗಿರಬಹುದು ಎಂದು ದೂರನ್ನು ನೀಡಿರುತ್ತಾರೆ. ನಮ್ಮ ಬೈಕ್ ನ್ನು ಯಾರೋ ಕಳುವು ಮಾಡಿಕೊಂಡು ಹೋಗಿರಲಿಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

ಈಗ ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ನಾನು ಈ ಹಿಂದೆ ನೋಡಿರುವುದಿಲ್ಲ.

(ಈಹಂತದಲ್ಲಿ ಮಾನ್ಯ ಎಪಿಪಿರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಅನುಮತಿ ಕೋರುತ್ತಾರೆ. ಅನುಮತಿ ನೀಡಲಾಯಿತು)

**ಪಾಟೀ ಸವಾಲು ಮಾನ್ಯ ಎಪಿಪಿರವರಿಂದಃ**

ದಿಃ 17.02.2021 ರಂದು ಸಂಜೆ 5.00 ಗಂಟೆ ಸಮಯದಲ್ಲಿ ನಾನು ನಮ್ಮ ಮನೆಯ ಮುಂದೆ ನನ್ನ ಬಾಬ್ತು ಕೆಎ 09-ಇಕ್ಯೂ-6435 ಬಜಾಜ್ ಪಲ್ಸರ್ ಮೋಟಾರ್ ಬೈಕ್ ನಿಲ್ಲಿಸಿ ಹೋಗಿದ್ದೆ ಎಂದರೆ ಸರಿಯಲ್ಲ. ನನ್ನ ತಾಯಿ ದಿಃ 18.02.2021 ರಂದು ಬೆ. 6.00 ಗಂಟೆಗೆ ಎದ್ದು ಮನೆಯ ಹೊರಗೆ ಬಂದು ನೋಡಲಾಗಿ, ಮೋಟಾರ್ ಬೈಕ್ ಸದರಿ ಸ್ಥಳದಲ್ಲಿ ಇರಲಿಲ್ಲ ಎಂದರೆ ಸರಿಯಲ್ಲ. ದಿಃ 17.02.2021 ರಂದು ರಾತ್ರಿ ವೇಳೆಯಲ್ಲಿ ಈಗ ನ್ಯಾಯಾಲಯದ ಮುಂದೆ ಇರುವ ಆರೋಪಿ ನಮ್ಮ ಬಜಾಜ್ ಪಲ್ಸರ್ ಮೋಟಾರ್ ಬೈಕ್ ನ್ನು ಕಳ್ಳತನ ಮಾಡಿಕೊಂಡು ಹೋಗಿದ್ದನು ಎಂದರೆ ಸರಿಯಲ್ಲ. ಈ ಬಗ್ಗೆ ನಾನು ದಿಃ 21.02.2021 ರಂದು ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿಪಿ-5 ಎಂದು ಗುರುತಿಸಲಾಯಿತು.

ಈಗ ಆರೋಪಿಗೆ ಅನುಕೂಲವಾಗಲಿ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಇರುವುದಿಲ್ಲ.**

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು. )

ಓ ಹೇ ಕೇಳಿ ಸರಿ ಇದೆ

ಹಿರಿಯ ಸಿವಿಲ್  ಜಡ್ಜ್  ಜೆಎಂಎಫ್ ಸಿ
ಗುಂಡ್ಲುಪೇಟೆ.